ಕರ್ನಾಟಕ ವಿಧಾನಸಭೆ

(15ನೇ ವಿಧಾನಸಭೆ)

ಹನ್ನೆರಡನೇ ಅಧಿವೇಶನ

ಕಾರ್ಯಕಲಾಪಗಳ ಪಟ್ಟಿ

ಮಂಗಳವಾರ, ದಿನಾಂಕ 29ನೇ ಮಾರ್ಚ್, 2022

(ಸಮಯ: ಬೆಳಿಗ್ಗೆ 11.00 ಗಂಟೆಗೆ)

----

1. ವಿತ್ತೀಯ ಕಾರ್ಯಕಲಾಪ

2022-23ನೇ ಸಾಲಿನ ಈ ಕೆಳಕಂಡ ಅನುದಾನ ಬೇಡಿಕೆಗಳ ಮೇಲೆ ನಡೆದ ಚರ್ಚೆಗೆ ಸರ್ಕಾರದ ಉತ್ತರ ಹಾಗೂ ಮತಕ್ಕೆ ಹಾಕುವುದು.

ಅಭಿಯಾಚನೆ ಸಂಖ್ಯೆ	ಅಭಿಯಾಚನೆಯ ಹೆಸರು
01	ಕೃಷಿ ಮತ್ತು ತೋಟಗಾರಿಕೆ
05	ಒಳಾಡಳಿತ ಮತ್ತು ಸಾರಿಗೆ
11	ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ
14	ಕಂದಾಯ
23	ಕಾರ್ಮಿಕ ಮತ್ತು ಕೌಶಲ್ಯಾಭಿವೃದ್ಧಿ
08	ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ
13	ಆಹಾರ ಮತ್ತು ನಾಗರಿಕ ಸರಬರಾಜು
22	ಆರೋಗ್ಯ ಮತ್ತು ಕುಟುಂಬ ಕಲ್ಯಾಣ
24	ಇಂಧನ
02	ಪಶು ಸಂಗೋಪನೆ ಮತ್ತು ಮೀನುಗಾರಿಕೆ
03	ಆರ್ಥಿಕ
04	ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ
06	ಮೂಲಭೂತ ಸೌಕರ್ಯ ಅಭಿವೃದ್ಧಿ
12	ವಾರ್ತಾ, ಪ್ರವಾಸೋದ್ಯಮ ಮತ್ತು ಯುವಜನ ಸೇವೆಗಳು
15	ಮಾಹಿತಿ ತಂತ್ರಜ್ಞಾನ
16	ವಸತಿ
17	ಶಿಕ್ಷಣ
18	ವಾಣಿಜ್ಯ ಮತ್ತು ಕೈಗಾರಿಕೆ
19	ನಗರಾಭಿವೃದ್ಧಿ
25	ಕನ್ನಡ ಮತ್ತು ಸಂಸ್ಕೃತಿ
26	ಯೋಜನೆ, ಸಾಂಖ್ಯಿಕ, ವಿಜ್ಞಾನ ಮತ್ತು ತಂತ್ರಜ್ಞಾನ
27	ಕಾನೂನು
28	ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ

... 2/

2. "ಚುನಾವಣಾ ವ್ಯವಸ್ಥೆಯಲ್ಲಿ ಸುಧಾರಣೆಗಳ ಅಗತ್ಯತೆ" ಕುರಿತು ವಿಶೇಷ ಚರ್ಚೆ

3. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು	:	ಇಪ್ಪತ್ತಾರನೇ ಪಟ್ಟಿ
ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು	:	ಇಪ್ಪತ್ತಾರನೇ ಪಟ್ಟಿ

4. ಅರ್ಜಿಯನ್ನೊಪ್ಪಿಸುವುದು

ಶ್ರೀ ಆನಂದ್ ಅಲಿಯಾಸ್ ವಿಶ್ವನಾಥ್ ಚಂದ್ರಶೇಖರ ಮಾಮನಿ (ಮಾನ್ಯ ಉಪ ಸಭಾಧ್ಯಕ್ಷರು ಹಾಗೂ ಅಧ್ಯಕ್ಷರು, ಅರ್ಜಿಗಳ ಸಮಿತಿ) ಅವರು ಈ ಕೆಳಕಂಡ ಅರ್ಜಿಯನ್ನು ಒಪ್ಪಿಸುವುದು:

ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ಅಭಿವೃದ್ಧಿಪಡಿಸುತ್ತಿರುವ ನಾಡಪ್ರಭು ಕೆಂಪೇಗೌಡ ಬಡಾವಣೆಗೆ ಮೂಲಸೌಕರ್ಯ ಒದಗಿಸುವ ಕುರಿತು.

5. ಗಮನ ಸೆಳೆಯುವ ಸೂಚನೆಗಳು

1) **ಶ್ರೀ ಈ ತುಕಾರಾಮ್ ಅವರು** – ನಾರಿಹಳ್ಳ ಪ್ರವಾಹಕ್ಕೆ ಕೊಚ್ಚಿಕೊಂಡು ಹೋಗಿ ಮರಣ ಹೊಂದಿರುವ ವ್ಯಕ್ತಿಯ ಕುಟುಂಬಕ್ಕೆ ವಿಶೇಷ ಪ್ರಕರಣವೆಂದು ಪರಿಗಣಿಸಿ ಪರಿಹಾರವನ್ನು ನೀಡುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

2) **ಶ್ರೀ ಎಂ.ವೈ. ಪಾಟೀಲ್ ಅವರು** – ಕಲಬುರಗಿ ಜಿಲ್ಲೆಯ ಅಫಜಲಪುರ ಪಟ್ಟಣದಲ್ಲಿರುವ ತಾಲ್ಲೂಕು ಆಸ್ಪತ್ರೆಯಲ್ಲಿ ಕೇವಲ ಹಾಜರಾತಿ ಪುಸ್ತಕದಲ್ಲಿ ಸಹಿ ಮಾಡಿ ಕರ್ತವ್ಯಕ್ಕೆ ಬಾರದೆ ಗೈರು ಹಾಜರಾಗುತ್ತಿರುವ ಹೊರ ಗುತ್ತಿಗೆ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವ ಡಿ–ಗ್ರೂಪ್ ಸಿಬ್ಬಂದಿಗಳು ಹಾಗೂ ವೈದ್ಯಾಧಿಕಾರಿಗಳ ವಿರುದ್ಧ ಶಿಸ್ತು ಕ್ರಮಕೈಗೊಳ್ಳುವ ಬಗ್ಗೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರ ಗಮನ ಸೆಳೆಯುವುದು.

3) **ಶ್ರೀ ಎಲ್.ಎ. ರವಿಸುಬ್ರಮಣ್ಯ ಅವರು** – ಶ್ರೀ ಗುರು ರಾಘವೇಂದ್ರ ಸಹಕಾರ ಬ್ಯಾಂಕ್ ಅನ್ನು ಪುನಶ್ಚೇತನಗೊಳಿಸುವ ಬಗ್ಗೆ ಮತ್ತು ಸದರಿ ಸಹಕಾರಿ ಬ್ಯಾಂಕ್ ಹಾಗೂ ಶ್ರೀ ವಸಿಷ್ಠ ಸೌಹಾರ್ದ ಸಹಕಾರಿ ಸಂಸ್ಥೆ (ನಿ)ಯಿಂದ ಸಾಲ ಪಡೆದವರಿಂದ ಸಾಲ ವಸೂಲಾತಿ, ಠೇವಣಿದಾರರಿಗೆ ಹಣ ಹಿಂದಿರುಗಿಸುವ ಯೋಜನೆಗಳ ಬಗ್ಗೆ ಮಾನ್ಯ ಸಹಕಾರ ಸಚಿವರ ಗಮನ ಸೆಳೆಯುವುದು.

... 3/

4) **ಡಾ. ಕೆ. ಶ್ರೀನಿವಾಸ ಮೂರ್ತಿ ಅವರು** – ಬೆಂಗಳೂರು ಗ್ರಾಮಾಂತರ ಜಿಲ್ಲೆಯ ನೆಲಮಂಗಲ ತಾಲ್ಲೂಕು ತ್ಯಾಮಗೊಂಡ್ಲು ಹೋಬಳಿ ವ್ಯಾಪ್ತಿಯಲ್ಲಿರುವ ವಿವಿಧ ಗ್ರಾಮಗಳಲ್ಲಿ ಕೈಗಾರಿಕಾ ಪ್ರದೇಶಕ್ಕಾಗಿ ಭೂಸ್ವಾಧೀನಪಡಿಸಿಕೊಂಡಿರುವ ಜಮೀನುಗಳಿಗೆ ನಿಗದಿಪಡಿಸಿರುವ ದರಕ್ಕಿಂತ ಮೂರು ಪಟ್ಟು ಹೆಚ್ಚಿನ ದರಕ್ಕೆ ಕೆ.ಐ.ಎ.ಡಿ.ಬಿ.ರವರು ಮಾರಾಟ ಮಾಡುತ್ತಿರುವ ಬಗ್ಗೆ ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವರ ಗಮನ ಸೆಳೆಯುವುದು.

5) **ಶ್ರೀ ರಿಜ್ವಾನ್ ಅರ್ಷದ್ ಅವರು** – ಕಿದ್ವಾಯಿ ಸ್ಮಾರಕ ಗ್ರಂಥಿ ಸಂಸ್ಥೆ ಆಸ್ಪತ್ರೆಗೆ ಹೊಂದಿಕೊಂಡಂತೆ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಗೆ ಸೇರಿದ ಸ್ಥಳದಲ್ಲಿರುವ ಬುದ್ಧಿಮಾಂದ್ಯ ಮಕ್ಕಳ ಆರೈಕೆ ಕೇಂದ್ರವನ್ನು ಸ್ಥಳಾಂತರ ಮಾಡುತ್ತಿರುವುದರಿಂದ ತೆರವಾಗುವ ಜಾಗವನ್ನು ರೋಗಿಗಳ ಅನುಕೂಲಕ್ಕಾಗಿ ಕಿದ್ವಾಯಿ ಸಂಸ್ಥೆಗೆ ವಹಿಸಿಕೊಡುವ ಬಗ್ಗೆ ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರ ಗಮನ ಸೆಳೆಯುವುದು.

6) **ಶ್ರೀ ಕೆ.ಆರ್. ರಮೇಶ್ ಕುಮಾರ್ ಅವರು** – ರಾಜ್ಯದಲ್ಲಿ ಕೃಷಿ ವಿಜ್ಞಾನ, ತೋಟಗಾರಿಕೆ, ಪಶು ವೈದ್ಯಕೀಯ, ರೇಷ್ಮೆ, ಕೃಷಿ, ಹೈನುಗಾರಿಕೆ ಹಾಗೂ ಮೀನುಗಾರಿಕೆ ಇಲಾಖೆಯ ನೇರ ನೇಮಕಾತಿಯಲ್ಲಿ ಅವುಗಳಿಗೆ ಸಂಬಂಧಿಸಿದ ಪದವಿಯನ್ನು ಕನಿಷ್ಟ ವಿದ್ಯಾರ್ಹತೆಯನ್ನಾಗಿ ಕಡ್ಡಾಯಗೊಳಿಸಿರುವಂತೆ, ಅರಣ್ಯ ಇಲಾಖೆಯಲ್ಲಿಯೂ ಸಹ ಅರಣ್ಯಶಾಸ್ತ್ರ ಪದವೀಧರರಿಗೆ ಸಂಪೂರ್ಣ ಮೀಸಲಾತಿಯನ್ನು ಒದಗಿಸುವ ಬಗ್ಗೆ ಮಾನ್ಯ ಅರಣ್ಯ ಹಾಗೂ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವರ ಗಮನ ಸೆಳೆಯುವುದು.

7) **ಶ್ರೀ ಕೆ.ವೈ. ನಂಜೇಗೌಡ ಅವರು** – ಜಮೀನು ಪಹಣಿಯಲ್ಲಿ ತಿದ್ದುಪಡಿ ಹಾಗೂ ಲೋಪದೋಷಗಳನ್ನು ಸರಿಪಡಿಸುವ ಅಧಿಕಾರವನ್ನು ಈ ಹಿಂದೆ ಇರುವಂತೆ ತಾಲ್ಲೂಕು ತಹಶೀಲ್ದಾರ್‌ರವರಿಗೆ ನೀಡುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

8) **ಶ್ರೀ ಪಿ. ರಾಜೀವ್ ಅವರು** – ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಿಂದ ಹಂಚಿಕೆಯಾಗಿದ್ದ ನಿವೇಶನವನ್ನು ಮನೆ ಮಾಲೀಕರು ನಿಯಮ ಬಾಹಿರವಾಗಿ ಧಾರ್ಮಿಕ ಉದ್ದೇಶಕ್ಕಾಗಿ ಬಳಸಲು ಯತ್ನಿಸುತ್ತಿರುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

9) **ಶ್ರೀಮತಿ ಕನೀಜ್ ಫಾತೀಮಾ ಅವರು** – ಕಲಬುರಗಿ ನಗರದ ಹೊರವರ್ತುಲ ರಸ್ತೆಯಲ್ಲಿ ಖರ್ಗೆ ಪೆಟ್ರೋಲ್ ಬಂಕ್‌ನಿಂದ ಹುಮನಾಬಾದ್ ಡೈರಿ ಸರ್ಕಲ್‌ವರೆಗಿನ ಭಾಗದಲ್ಲಿ ರಸ್ತೆ ಅಪಘಾತಗಳನ್ನು ತಡೆಯುವ ಸಲುವಾಗಿ ಭಾರಿ ವಾಹನಗಳ ಸಂಚಾರವನ್ನು ಬೆಳಿಗ್ಗೆ 9 ರಿಂದ ರಾತ್ರಿ 9 ರವರೆಗೆ ನಿಷೇದಿಸುವ ಬಗ್ಗೆ ಮಾನ್ಯ ಗೃಹ ಸಚಿವರ ಗಮನ ಸೆಳೆಯುವುದು.

10) **ಶ್ರೀ ಈಶ್ವರ್ ಖಂಡ್ರೆ ಅವರು** – ಆರೋಗ್ಯ ಇಲಾಖೆಯಲ್ಲಿ ಹಾಗೂ ಸ್ಥಳೀಯ ಸಂಸ್ಥೆಗಳಲ್ಲಿ ಖಾಲಿಯಿರುವ ಆರೋಗ್ಯ ನಿರೀಕ್ಷಣಾಧಿಕಾರಿ ಹುದ್ದೆಗಳಿಗೆ ಡಿಪ್ಲೋಮಾ ಇನ್ ಹೆಲ್ತ್ ಇನ್ಸ್‌ಪೆಕ್ಟರ್ ಕೋರ್ಸ್ ಪೂರ್ಣಗೊಳಿಸಿರುವ ಅಭ್ಯರ್ಥಿಗಳನ್ನು ನೇಮಕ ಮಾಡುವ ಬಗ್ಗೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರ ಗಮನ ಸೆಳೆಯುವುದು.

...4/

11) **ಶ್ರೀ ಸುನೀಲ ಬಿಳಿಯಾ ನಾಯ್ಕ ಅವರು** – ಉತ್ತರ ಕನ್ನಡ ಜಿಲ್ಲೆಗೆ ಸಂಬಂಧಿಸಿದಂತೆ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಗೆ ಬಿಡುಗಡೆ ಮಾಡಿದ ಅನುದಾನವನ್ನು ಸಕಾಲದಲ್ಲಿ ಉಪಯೋಗಿಸಲು ನಿರಾಸಕ್ತಿ ತೋರಿಸಿ ಕರ್ತವ್ಯ ಲೋಪವೆಸಗಿದ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳುವ ಬಗ್ಗೆ ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರ ಗಮನ ಸೆಳೆಯುವುದು.

ಎಂ.ಕೆ.ವಿಶಾಲಾಕ್ಷಿ
ಕಾರ್ಯದರ್ಶಿ(ಪ್ರ)

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ಅಂತರ್ಜಾಲದ ಈ ವಿಳಾಸದಲ್ಲಿ ಪಡೆದುಕೊಳ್ಳಬಹುದು
http://kla.kar.nic.in/assembly/lob/lob.htm